ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ರಾಜ್ಯದ ನಗರಸಭೆ, ಪುರಸಭೆಗಳಲ್ಲಿ ಅಧ್ಯಕ್ಷ, ಉಪಾಧ್ಯಕ್ಷರುಗಳ ಚುನಾವಣೆ ನಡೆಯದಿರುವ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನ ಸಭೆಯಿಂದ ಚುನಾಯಿತರಾದವರು):-

487 (749) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರ ಸಭೆಯಲ್ಲಿ 14ನೇ ಹಣಕಾಸಿನ ವಾರ್ಡ್‌ವಾರು ವಿವಿಧ ಅಭಿವೃದ್ಧಿ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಸದಸ್ಯರುಗಳ ಚುನಾವಣೆ ಮುಗಿದು ಒಂದು ವರ್ಷ ಕಳೆದರೂ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ನಗರದಲ್ಲಿರುವ ವಿವಿಧ ವಾರ್ಡ್‌ಗಳ ರಸ್ತೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?